# ಕರ್ನಾಟಕ ಸರ್ಕಾರ ನಡವಳಿ

**ವಿಷಯ :** ಜಿಲ್ಲಾ/ ತಾಲ್ಲೂಕು/ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರವ ಸ್ವಚ್ಛತಾ ಕಾರ್ಮಿಕರಿಗೆ ಅಗತ್ಯ ರಕ್ಷಣಾತ್ಮಕ ಸಾಮಗ್ರಿ ಮತ್ತು ಸುರಕ್ಷತಾ ಸಲಕರಣೆಗಳಿಲ್ಲದೇ ಸ್ವಚ್ಛತಾ ಕಾರ್ಯಗಳನ್ನು ನಿರ್ವಹಿಸುತ್ತಿದ್ದಲ್ಲಿ, ಜಿಲ್ಲಾ/. ತಾಲ್ಲೂಕು/ ಗ್ರಾಮ ಪಂಚಾಯತಿಗಳು ಸಂಬಂಧಪಟ್ಟ ಅಧಿಕಾರಿಗಳು/ಗುತ್ತಿಗೆದಾರರು/ಏಜೆನ್ಸಿಗಳ ಮೇಲೆ ದಂಡ ವಿಧಿಸುವ ಕುರಿತು.

**ಓದಲಾಗಿದೆ :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ ದಿನಾಂಕ: 23.02.2018.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಅಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ ದಿನಾಂಕ: 19.02.2021

**ಪ್ರಸ್ತಾವನೆ:**

ಕೇಂದ್ರ ಸರ್ಕಾರದ ಕಾನೂನು ಮತ್ತು ನ್ಯಾಯ ಮಂತ್ರಾಲಯವು "The Prohibition of Employment as Manual Scavengers and their Rehabilitation Act, 2013" ಕಾಯ್ದೆಯನ್ನು ದಿನಾಂಕ: 06.12.2013 ರಿಂದ ಅನ್ವಯಿಸುವಂತೆ ದೇಶಾದ್ಯಂತ ಜಾರಿಗೆ ತಂದಿರುತ್ತದೆ. ರಾಜ್ಯ ಸರ್ಕಾರವು ಅಧಿಸೂಚನೆ ಸಂಖ್ಯೆ: SWD/237/SDC/2012 (2), ದಿನಾಂಕ 03.05.2014ರಲ್ಲಿ, ಸದರಿ ಕಾಯ್ದೆ ಪ್ರಕರಣ 7ರಡಿ ಯಾವುದೇ ವ್ಯಕ್ತಿ, ಸ್ಥಳೀಯ ಪ್ರಾಧಿಕಾರ ಅಥವಾ ಯಾವುದೇ ಸಂಸ್ಥೆಗಳು ವ್ಯಕ್ತಿ/ವ್ಯಕ್ತಿಗಳನ್ನು ಸೆಪ್ಟಿಕ್ ಟ್ಯಾಂಕ್ ಮತ್ತು ಚರಂಡಿಯಂತಹ ಅಪಾಯಕಾರಿ ಸ್ಥಳಗಳನ್ನು ಸ್ವಚ್ಛಗೊಳಿಸುವ ಕಾರ್ಯಕ್ಕೆ ದೈಹಿಕವಾಗಿ ತೊಡಗಿಸಿಕೊಳ್ಳಬಾರದು ಹಾಗೂ ನಿಯೋಜಿಸಿಕೊಳ್ಳಬಾರದೆಂದು ದಿನಾಂಕ:05-06.2014 ರಿಂದ ಅನ್ವಯಿಸುವಂತೆ ರಾಜ್ಯಾದಂತ ಜಾರಿಗೆ ತಂದಿರುತ್ತದೆ.

The Prohibition of Employment as Manual Scavengers and their Rehabilitation Rules, 2013 ರ ಅಧ್ಯಾಯ II ರ ನಿಯಮ (3),(4),(5),(6),(7)&(8) ರಲ್ಲಿ, ಸೆಪ್ಟಿಕ್ ಟ್ಯಾಂಕ್, ಚರಂಡಿ ಮತ್ತು ಮುಂತಾದ ಅಪಾಯಕಾರಿ ಸ್ಥಳಗಳನ್ನು ಆಧುನಿಕ ಯಂತ್ರಗಳನ್ನು ಬಳಸುವ ಮೂಲಕ ಸ್ವಚ್ಛಗೊಳಿಸುವ ಕಾರ್ಯಕ್ಕೆ ಯಾವುದೇ ವ್ಯಕ್ತಿ/ವ್ಯಕ್ತಿಗಳನ್ನು ನಿಯೋಜಿಸಬೇಕಾದ್ದಲ್ಲಿ, ಅಂತಹವರಿಗೆ ಒದಗಿಬೇಕಾಗಿರುವ ಅಗತ್ಯ ರಕ್ಷಣಾತ್ಮಕ ಸಾಮಗ್ರಿ ಮತ್ತು ಸುರಕ್ಷತಾ ಸಲಕರಣೆಗಳು ಹಾಗೂ ಸ್ವಚ್ಛಗೊಳಿಸುವ ವಿಧಾನದ ಬಗ್ಗೆ ವಿಸ್ತೃತವಾಗಿ ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸಭೆಯ ನಡವಳಿಗಳ ಅನುಸಾರ ನಗರ ಸ್ಥಳಿಯ ಸಂಸ್ಥೆಗಳಲ್ಲಿ ಸುರಕ್ಷಿತ ಪರಿಕರಗಳನ್ನು ತೊಡಿಸದೇ ಕಾರ್ಮಿಕರಿಂದ ಎಸ್.ಟಿ.ಪಿ. ಪ್ಲಾಂಟ್‌ಗಳನ್ನು ಸ್ವಚ್ಛಗೊಳಿಸಿದಲ್ಲಿ ಅಂತಹ ಗುತ್ತಿಗೆದಾರರಿಗೆ ದಂಡ ವಿಧಿಸಲು ತೀರ್ಮಾನವಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗಳಲ್ಲಿ ವ್ಯಾಪ್ತಿಯಲ್ಲಿ ವೈಯಕ್ತಿಕ ಶೌಚಾಲಯ/ಸಮುದಾಯ ಶೌಚಾಲಯ/ ಮಲ ಗುಂಡಿಗಳು/ ಸೆಪ್ಟಿಕ್ ಟ್ಯಾಂಕ್/ ಚರಂಡಿ ಹಾಗೂ ಮುಂತಾದ ಸ್ವಚ್ಛತಾ ಕಾರ್ಯಗಳನ್ನು ನಿರ್ವಹಿಸುವ ಸಂದರ್ಭದಲ್ಲಿ ಸ್ವಚ್ಛತಾ ಸಿಬ್ಬಂದಿಗಳಿಗೆ ಅಗತ್ಯ ರಕ್ಷಣಾತ್ಮಕ ಸಾಮಗ್ರಿ ಮತ್ತು ಸುರಕ್ಷತಾ ಸಲಕರಣೆಗಳಿಲ್ಲದೇ ಕಾರ್ಯ ನಿರ್ವಹಿಸುತ್ತಿರುವುದು ಕಂಡು ಬಂದಲ್ಲಿ, ಸಂಬಂಧಿಸಿದ ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯಿತಿಗಳು ಅಧಿಕಾರಿಗಳು/ಗುತ್ತಿಗೆದಾರರು/ ಏಜೆನ್ಸಿಗಳ ಮೇಲೆ ದಂಡ ವಿಧಿಸಲು ತೀರ್ಮಾನಿಸಲಾಗಿದೆ.

ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗಳಲ್ಲಿ ದೈನಂದಿನ ಸ್ವಚ್ಛತಾ ಕಾರ್ಯಗಳನ್ನು ನಿರ್ವಹಿಸುವ ಖಾಯಂ ಸಿಬ್ಬಂದಿಯಾಗಲಿ ಅಥವಾ ತಾತ್ಕಾಲಿಕವಾಗಿ ನೇಮಕಾತಿಗೊಂಡು ಸ್ವಚ್ಛತಾ ಸಿಬ್ಬಂದಿಗಳಿಗೆ ರಕ್ಷಣಾತ್ಮಕ ಸಾಮಗ್ರಿ ಮತ್ತು ಸುರಕ್ಷತಾ ಸಲಕರಣೆಗಳನ್ನು ಕಡ್ಡಾಯವಾಗಿ ನೀಡಬೇಕಾಗಿರುತ್ತದೆ. ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡಿರುವ ಸ್ವಚ್ಛತಾ ಸಿಬ್ಬಂದಿಗಳಿಗೆ ಸಂಬಂಧಪಟ್ಟ ಗುತ್ತಿಗೆದಾರರು/ಏಜೆನ್ಸಿಗಳಿಂದ ಸುರಕ್ಷತಾ ಸಲಕರಣೆಗಳನ್ನು ನೀಡುವುದು ಆದ್ಯತೆಯ ವಿಷಯವಾಗಿರುತ್ತದೆ.

ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಸ್ವಚ್ಛತಾ ಸಿಬ್ಬಂದಿಗಳಿಗೆ ಅಗತ್ಯ ರಕ್ಷಣಾತ್ಮಕ ಸಾಮಗ್ರಿ ಮತ್ತು ಸುರಕ್ಷತಾ ಸಲಕರಣೆಗಳಿಲ್ಲದೆ ಎಸ್ ಟಿ ಪಿ/ಸೆಪ್ಟಿಕ್ ಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಕಂಡು ಬಂದಲ್ಲಿ, ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗಳು ಸಂಬಂಧಿಸಿದ ಅಧಿಕಾರಿಗಳು/ಗುತ್ತಿಗೆದಾರರು/ಏಜೆನ್ಸಿಗಳ ಮೇಲೆ ರೂ.50,000 ಮತ್ತು ಸ್ವಚ್ಛತಾ ಕೆಲಸಗಾರರು ಅಗತ್ಯ ಸುರಕ್ಷತಾ ಪರಿಕರಗಳಾದ ಹ್ಯಾಂಡ್ ಗ್ಲೌಸ್, ಗಮ್ ಬೂಟ್ಸ್, ಹೆಲ್ಮೆಟ್, ಗಾಗಲ್ಸ್,, ಮಾಸ್ಕ್, ಸ್ಯಾನಿಟೈಸರ್ ಇತ್ಯಾದಿಗಳನ್ನು ಉಪಯೋಗಿಸದೆ ಕಾರ್ಯನಿರ್ವಹಿಸುತ್ತಿರುವ ಸಚ್ಛತಾ ಕಾರ್ಯಗಳ ವೈಫಲ್ಯ ಪ್ರಕರಣಗಳಲ್ಲಿ ರೂ. 10,000 ಗಳ ವರೆಗೆ ದಂಡ ವಿಧಿಸಲು ನಿರ್ಣಯಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಕೆಪಿಆರ್‌ಸಿ/ಎಡಿಎಮ್20/ಆರ್‌ಎಮ್‌ಎಸ್/05/2021,</u>**
**<u>ಬೆಂಗಳೂರು, ದಿನಾಂಕ : 22.02.2021</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಚ್ಛತಾ ಸಿಬ್ಬಂದಿಗಳಿಗೆ ಅಗತ್ಯ ರಕ್ಷಣಾತ್ಮಕ ಸಾಮಗ್ರಿ ಮತ್ತು ಸುರಕ್ಷತಾ ಸಲಕರಣೆಗಳಿಲ್ಲದೆ ಕಾರ್ಯನಿರ್ವಹಿಸುತ್ತಿರುವುದು ಮತ್ತು ಸಚ್ಛತಾ ಕಾರ್ಯಗಳ ವೈಫಲ್ಯ ಪ್ರಕರಣಗಳಲ್ಲಿ ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗಳು ಸಂಬಂಧಿಸಿದ ಅಧಿಕಾರಿಗಳು/ಗುತ್ತಿಗೆದಾರರು/ಏಜೆನ್ಸಿಗಳ ಮೇಲೆ ಈ ಕೆಳಕಂಡಂತೆ ದಂಡ ವಿಧಿಸಲು ಆದೇಶಿಸಿದೆ.

1) ಎಸ್ ಟಿ ಪಿ/ಸೆಪ್ಟಿಕ್ ಪ್ರಕರಣಗಳಲ್ಲಿ - ರೂ.50,000 ಗಳು ಮತ್ತು;
2) ಸ್ವಚ್ಛತಾ ಕೆಲಸಗಾರರು ಅಗತ್ಯ ಸುರಕ್ಷತಾ ಪರಿಕರಗಳಾದ ಹ್ಯಾಂಡ್ ಗ್ಲೌಸ್, ಗಮ್ ಬೂಟ್ಸ್, ಹೆಲ್ಮೆಟ್, ಗಾಗಲ್ಸ್,, ಮಾಸ್ಕ್, ಸ್ಯಾನಿಟೈಸರ್ ಇತ್ಯಾದಿಗಳನ್ನು ಉಪಯೋಗಿಸದೆ ಕಾರ್ಯನಿರ್ವಹಿಸುತ್ತಿರುವ ಸಚ್ಛತಾ ಕಾರ್ಯಗಳ ವೈಫಲ್ಯ ಪ್ರಕರಣಗಳಲ್ಲಿ ರೂ. 10,000 ಗಳು.

ಈ ನಿಟ್ಟಿನಲ್ಲಿ ಯಾವುದೇ ನಿರ್ಲಕ್ಷ ವಹಿಸಿದ್ದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನ ನೇರ ಹೊಣೆಗಾರಿಕೆಯನ್ನಾಗಿ ಮಾಡಲಾಗುವುದು ಹಾಗೂ ಖಾಯಂ/ತಾತ್ಕಾಲಿಕವಾಗಿ ನೇಮಕಗೊಂಡಿರುವ ಸ್ವಚ್ಛತಾ ಸಿಬ್ಬಂದಿಗಳಿಗೆ ಅಗತ್ಯ ರಕ್ಷಣಾತ್ಮಕ ಸಾಮಗ್ರಿ ಮತ್ತು ಸುರಕ್ಷತಾ ಸಲಕರಣೆಗಳಿಲ್ಲದೆ ಕಾರ್ಯನಿರ್ವಹಿಸುತ್ತಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಮುಂದುವರೆದು, ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ವೃತ್ತಿ ನಿಷೇದ ಮತ್ತು ಅವರ ಪುನರ್ ವಸತಿ ಅಧಿನಿಯಮ, 2013ರಂತೆ ಮೇಲಿನ ಅಂಶಗಳನ್ನು ಉಲ್ಲಂಘನೆ ಮಾಡಿದಲ್ಲಿ ದಂಡ ಪ್ರಕ್ರಿಯಾ ಸಂಹಿತೆಯ ಪ್ರಕಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 22/02/21.
(ಬಿ. ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
22/2/21

**<u>ಗೆ:</u>**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಕಳುಹಿಸುತ್ತಾ, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಕೋರಿದೆ (2 ಪ್ರತಿಗಳು).

**ಇವರಿಗೆ,**

1. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
2. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
5. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
6. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ.
7. ಎಲ್ಲಾ ನಿರ್ದೇಶಕರು, ಗ್ರಾಅಪಂರಾ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಎಲ್ಲಾ ನಿರ್ದೇಶಕರು, ಪಂಚಾಯತ್ ರಾಜ್ಯ ಆಯುಕ್ತಾಲಯ, ಗ್ರಾಅಪಂರಾ ಇಲಾಖೆ, ಬೆಂಗಳೂರು
9. ರಾಜ್ಯದ ಎಲ್ಲಾ ಜಿಲ್ಲಾ / ತಾಲ್ಲೂಕು / ಗ್ರಾಮ ಪಂಚಾಯತಿಗಳ ಅಧ್ಯಕ್ಷರು / ಉಪಾಧ್ಯಕ್ಷರುಗಳಿಗೆ.

**<u>ಪ್ರತಿ ಮಾಹಿತಿಗಾಗಿ :</u>**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪಂರಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಅಪಂರಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.
7. ನಿರ್ದೇಶಕರು, ಇ-ಆಡಳಿತ, ಗ್ರಾಅಪಂರಾ ಇಲಾಖೆ ಇವರಿಗೆ ಕಳುಹಿಸುತ್ತಾ ವೆಬ್‌ಸೈಟ್ ಆದೇಶ ಪ್ರತಿಯನ್ನು ಅಳವಡಿಸಲು ಕೋರಿದೆ.
8. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
9. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ. ಸದರಿ ಪ್ರತಿಕೆಯಲ್ಲಿ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ
10. ಕಡತಪ್ರತಿ.